All India Radio: Bangalore
Regional Bulletin In Kannada
24.08.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸೆಪ್ಟೆಂಬರ್ ೨ರಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಾರಿ ; ಬೆಂಗಳೂರು ಆಡಳಿತ ಹೊಸ ಯುಗಾರಂಭಕ್ಕೆ ಸಾಕ್ಷಿ
- ಸಮಗ್ರ ವಾಯು ರಕ್ಷಣಾ ಶಸ್ತ್ರಾಸ್ತ್ರ ವ್ಯವಸ್ಥೆಯ ಯಶಸ್ವಿ ಪರೀಕ್ಷೆ, ರಕ್ಷಣಾ ವ್ಯವಸ್ಥೆಯಲ್ಲಿ ಭಾರತದ ದಿಟ್ಟ ಹೆಜ್ಜೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
- ಚಿಕ್ಕಬಳ್ಳಾಪುರದಲ್ಲಿ ನಿರುದ್ಯೋಗ ಯುವಕರಿಗಾಗಿ ಉದ್ಯೋಗ ಮೇಳ ಆಯೋಜನೆ ; ಪ್ರತಿಷ್ಠತ ೭೫ ಕಂಪನಿಗಳು ಭಾಗಿ
- ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ; ದಿನದ ಮೊದಲನೇ ಪಂದ್ಯದಲ್ಲಿಂದು ಬೆಂಗಳೂರು ಬ್ಲಾಸ್ಟರ್ಸ್-ಮಂಗಳೂರು ಡ್ರಾಗನ್ಸ್ ಮುಖಾಮುಖಿ

<><><><>

ಸೆಪ್ಟೆಂಬರ್ ೨ರಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಾರಿಗೆ ಬರಲಿದ್ದು, ಬೆಂಗಳೂರು ಆಡಳಿತ ಒಂದು ಹೊಸ ಯುಗಾರಂಭವನ್ನು ಕಾಣಲಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬೆಂಗಳೂರು ಆಡಳಿತಕ್ಕೆ ಹೊಸ ರೂಪ ನೀಡಲು ನೂತನ ಪ್ರಾಧಿಕಾರ ಸಿದ್ಧವಾಗಿದೆ. ಸೆಪ್ಟೆಂಬರ್ ೨ ರಿಂದ ಐದು ಹೊಸ ಪಾಲಿಕೆ ಕಚೇರಿಗಳ ಕಾರ್ಯಾರಂಭವಾಗಲಿದೆ ಎಂದಿದ್ದಾರೆ. ವಿಕೇಂದ್ರೀಕರಣದ ಮೂಲಕ ನಗರ ತ್ವರಿತ ಅಭಿವೃದ್ಧಿ ಮತ್ತು ಸುಗಮ ಜನಜೀವನಕ್ಕೆ ಸಾಕ್ಷಿಯಾಗಲಿದೆ. ಅಸ್ತಿತ್ವಕ್ಕೆ ಬರಲಿರುವ ಬೆಂಗಳೂರು ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಮತ್ತು ಕೇಂದ್ರ ಪಾಲಿಕೆಗಳಿಗೆ ಪ್ರತ್ಯೇಕ ಆಯುಕ್ತ ನೇಮಕ ಮಾಡಲಾಗುವುದು. ಪಾಲಿಕೆಯ ಸುಗಮ ಆಡಳಿತಕ್ಕಾಗಿ ತಲಾ ೨ ವಲಯಗಳ ರಚನೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

<><><><>

ಒಡಿಶಾದ ಕರಾವಳಿಯಲ್ಲಿ ಇಂಟಿಗ್ರೇಟೆಡ್ ಏರ್ ಡಿಫೆನ್ಸ್ ವೆಪನ್ ಸಿಸ್ಟಮ್‌ನ ಮೊದಲ ಹಾರಾಟ ಪರೀಕ್ಷೆಗಳನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ - ಡಿಆರ್‌ಡಿಒ ಯಶಸ್ವಿಯಾಗಿ ನಡೆಸಿದೆ. ಇಂಟಿಗ್ರೇಟೆಡ್ ಏರ್ ಡಿಫೆನ್ಸ್ ವೆಪನ್ ಸಿಸ್ಟಮ್ ಎಂಬುದು ದೇಶೀಯ ಕ್ಷಿಪ್ರ ಪ್ರತಿಕ್ರಿಯೆ ನೆಲದಿಂದ ಆಕಾಶಕ್ಕೆ ಹಾರುವ ಕ್ಷಿಪಣಿ, ಅಡ್ವಾನ್ಸ್ಡ್ ವೆರಿ ಶಾರ್ಟ್ ರೇಂಜ್ ಏರ್ ಡಿಫೆನ್ಸ್ ಸಿಸ್ಟಮ್ ಕ್ಷಿಪಣಿ ಮತ್ತು ಹೈ-ಪವರ್ ಲೇಸರ್-ಆಧಾರಿತ ಡೈರೆಕ್ಟ್ ಎನರ್ಜಿ ವೆಪನ್ ಅನ್ನು ಒಳಗೊಂಡಿರುವ ಬಹು-ಪದರದ ವಾಯು ರಕ್ಷಣಾ ವ್ಯವಸ್ಥೆಯಾಗಿದೆ. ಯಶಸ್ವಿ ಪರೀಕ್ಷಾರ್ಥ ಹಾರಾಟದ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಡಿಆರ್‌ಡಿಒ ಮತ್ತು ಸೇನಾ ಪಡೆಗಳಿಗೆ ಅಭಿನಂದನೆ ಸಲ್ಲಿಸಿ, ಸಂತಸ ಹಂಚಿಕೊಂಡಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ರಕ್ಷಣಾ ವ್ಯವಸ್ಥೆಯಲ್ಲಿ ಭಾರತ ನಿರ್ಣಾಯಕ ಮತ್ತು ದಿಟ್ಟ ಹೆಜ್ಜೆ ಇಟ್ಟಿದೆ. ಸಮಗ್ರ ವಾಯು ರಕ್ಷಣಾ ಶಸ್ತ್ರಾಸ್ತ್ರ ವ್ಯವಸ್ಥೆಯ ಚೊಚ್ಚಲ ಪರೀಕ್ಷೆ ಯಶಸ್ವಿಯಾಗಿದ್ದು, ಇದು ದೇಶದ ತಂತ್ರಜ್ಞಾನ ಶಕ್ತಿಯನ್ನು ಪ್ರದರ್ಶಿಸಿದೆ. ಹಾಗೂ ವೈಮಾನಿಕ ದಾಳಿಗಳ ವಿರುದ್ಧ ಸುದರ್ಶನ ಚಕ್ರವಾಗಲಿದೆ ಎಂದು ತಿಳಿಸಿದ್ದಾರೆ.

<><><>

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆಯುತ್ತಿರುವ ವೋಟ್ ಅಧಿಕಾರ ಯಾತ್ರೆಯಲ್ಲಿ ಭಾಗವಹಿಸಲು ಬಿಹಾರಕ್ಕೆ ತೆರಳಿರುವ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಶಾಸಕರ ಮತ್ತು ನಾಯಕರ ತಂಡ ರಾಹುಲ್ ಗಾಂಧಿಯವರನ್ನು ಭೇಟಿ ಮಾಡಿತು. ತಂಡದಲ್ಲಿ ಶಾಸಕರಾದ ಶ್ರೀನಿವಾಸ ಮಾನೆ, ಬಾಬಾಸಾಹೇಬ್ ಪಾಟೀಲ್, ರಾಜು ಸೇಠ್, ರಿಜ್ವಾನ್ ಅರ್ಷದ್, ಬಿ.ಎಂ ನಾಗರಾಜ್, ನಯನ ಮೋಟಮ್ಮ, ಅಶೋಕ್ ಪಟ್ಟಣ್, ಆನಂದ್ ಕಡೂರ್, ವೇಣುಗೋಪಾಲ್ ನಾಯಕ್, ಡಾ ಎನ್.ಟಿ ಶ್ರೀನಿವಾಸ್, ಬಸನಗೌಡ ಬಾದರ್ಲಿ, ರಾಷ್ಟ್ರೀಯ ಯುವ ಕಾಂಗ್ರೆಸ್ ನಿಕಟಪೂರ್ವ ಅಧ್ಯಕ್ಷ ಬಿ.ವಿ. ಶ್ರೀನಿವಾಸ್, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ ಗೌಡ ಇದ್ದಾರೆ.

<><><>

ರಾಜ್ಯಾದ್ಯಂತ ಗೌರಿ-ಗಣೇಶ ಹಬ್ಬಕ್ಕೆ ಸಿದ್ಧತೆಗಳು ಚುರುಕುಗೊಂಡಿದ್ದು, ವಿವಿಧ ಜಿಲ್ಲೆಗಳಲ್ಲಿ ಗೌರಿ-ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಅಂತಿಮ ಹಂತದ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ಎರಡು ಶತಮಾನಕ್ಕೂ ಅಧಿಕ ಇತಿಹಾಸವಿರುವ ಕೊಡಗು ಜಿಲ್ಲೆಯ ವೀರಾಜಪೇಟೆ ಗೌರಿಗಣೇಶೋತ್ಸವದಲ್ಲಿ ಈ ವರ್ಷ ೨೨ ಸ್ಥಳಗಳಲ್ಲಿ ಸಾಮೂಹಿಕವಾಗಿ ಉತ್ಸವ ಮೂರ್ತಿಗಳ

ಪ್ರತಿಷ್ಠಾಪನೆ ಮಾಡಲಾಗುತ್ತಿದೆ. ಸೆಪ್ಟೆಂಬರ್ ೬ ರಂದು ರಾತ್ರಿ ಎಲ್ಲಾ ಉತ್ಸವ ಮೂರ್ತಿಗಳನ್ನು ವಿದ್ಯುದ್ದೀಪಾಲಂಕೃತ ಮಂಟಪಗಳಲ್ಲಿ ಶೋಭಾಯಾತ್ರೆಯ ಮೂಲಕ ಗೌರಿಕೆರೆಯಲ್ಲಿ ವಿಸರ್ಜಿಸಲು ಉತ್ಸವ ಸಮಿತಿಗಳು ತೀರ್ಮಾನಿಸಿವೆ. ಸರ್ಕಾರದ ನಿಯಮಪಾಲನೆ ಮೂಲಕ ಎಲ್ಲರೂ ಸಂಭ್ರಮದಿಂದ ಹಬ್ಬದಲ್ಲಿ ತೊಡಗಿಸಿಕೊಳ್ಳಲಿದ್ದಾರೆ ಎಂದು ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲೆಯಲ್ಲಿ ಗೌರಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳನ್ನು ಶಾಂತಿ ಸೌಹಾರ್ಧತೆಯಿಂದ ಆಚರಿಸಲು ೫ ಕೆ.ಎಸ್.ಆರ್.ಪಿ. ೧೦ ಡಿ.ಎ.ಆರ್. ತುಕಡಿ ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ನೇಮಕ ಮಾಡಿದೆಂದು ಬಳ್ಳಾರಿ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ತಿಳಿಸಿದ್ದಾರೆ. ಜಿಲ್ಲಾದ್ಯಾಂತ ವ್ಯಾಪಕ ಬಂದೋಬಸ್ತ್ ಮಾಡಲಾಗಿದೆ. ಅಲ್ಲದೆ, ೬೦೦ ಗೃಹರಕ್ಷಕ ದಳದ ಸಿಬ್ಬಂದಿಯನ್ನು ನೇಮಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><><>

ಸನ್ನಡತೆಯುಳ್ಳ ರೌಡಿಗಳನ್ನು ಪೊಲೀಸ್ ಇಲಾಖೆಯ ಮಾರ್ಗಸೂಚಿ ಪ್ರಕಾರ ರೌಡಿ ಪಟ್ಟಿಯಿಂದ ತೆಗೆಯಲಾಗುವುದು ಎಂದು ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ತಿಳಿಸಿದರು. ಕೆಜಿಎಫ್ ನಗರದ ಚಾಂಪಿಯನ್ ರೀಫ್ ನಲ್ಲಿ ರೌಡಿ ಪೆರೇಡ್ ನಡೆಸಿ ಮಾತನಾಡಿದ ಅವರು, ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿ ೬೦೦ಕ್ಕೂ ಹೆಚ್ಚು ಜನ ರೌಡಿ ಪಟ್ಟಿಯಲ್ಲಿದ್ದಾರೆ. ಅವರನ್ನು ಕರೆದು ಅವರ ಚಟುವಟಿಕೆ ಬಗ್ಗೆ ವಿಚಾರಣೆ ನಡೆಸಲು ಹಾಗೂ ನಿಗಾ ಇಡಲು ಪೆರೇಡ್ ನಡೆಸಲಾಗಿದೆ. ಗೌರಿ ಗಣೇಶ ಹಬ್ಬದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯಬಾರದು ಎಂಬ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ ಎಂದರು.

<><><><>

ನಿರುದ್ಯೋಗಿ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಡಾ.ಎಚ್.ನರಸಿಂಹಯ್ಯ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಇಂದು ಚಿಕ್ಕಬಳ್ಳಾಪುರದ ಗೌರಿಬಿದನೂರು ತಾಲೂಕಿನ ಸಮಾನತಾ ಸೌಧದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಡಾ.ಹೆಚ್.ಎನ್.ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್.ಶಿವಶಂಕರ ರೆಡ್ಡಿ, ಉದ್ಯೋಗ ಮೇಳಗಳನ್ನು ಆಯೋಜಿಸುವುದರಿಂದ ನಿರುದ್ಯೋಗಿ ಯುವ ಜನರಿಗೆ ಉದ್ಯೋಗವಕಾಶಗಳ

ಬಾಗಿಲು ತೆರೆದಂತಾಗುತ್ತದೆ. ಒಂದೇ ವೇದಿಕೆಯಲ್ಲಿ ಹಲವಾರು ಕಂಪನಿಗಳು ಭಾಗವಹಿಸುವುದರಿಂದ ಉದ್ಯೋಗಗಳ ಆಯ್ಕೆಗೂ ಹೆಚ್ಚಿನ ಅವಕಾಶ ದೊರೆಯುತ್ತದೆ. ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾವಂತ ನಿರುದ್ಯೋಗಿ ಯುವ ಜನರಿಗೆ ಉದ್ಯೋಗ ಸಹಕಾರಿಯಾಗಿದ್ದು, ಉತ್ತಮ ಮಾರ್ಗದರ್ಶನವೂ ದೊರೆಯುತ್ತದೆ ಎಂದರು. ಬೆಂಗಳೂರು ಸೇರಿದಂತೆ ವಿವಿಧೆಡೆಗಳಿಂದ ಸುಮಾರು ೭೫ಕ್ಕೂ ಹೆಚ್ಚು ಉದ್ಯೋಗದಾತ ಕಂಪನಿಗಳು ಈ ಮೇಳದಲ್ಲಿ ಭಾಗವಹಿಸಿದ್ದು, ಐನೂರಕ್ಕೂ ಹೆಚ್ಚು ನಿರುದ್ಯೋಗಿ ಯುವಜನರು ಪಾಲ್ಗೊಂಡಿದ್ದರು ಎಂದರು.

<><><>

ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳನ್ನು ತ್ವರಿತ ಇತ್ಯರ್ಥಪಡಿಸುವ ಸಲುವಾಗಿ ಕೋಲಾರ ಜಿಲ್ಲೆಗೆ ಸಂಬಂಧಿಸಿದಂತೆ ಸೆಪ್ಟೆಂಬರ್ ೧೩ ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ನಟೇಶ್ ಆರ್. ತಿಳಿಸಿದರು. ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ  ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ "ದೇಶಕ್ಕಾಗಿ ೯೦ ದಿನಗಳ ಮಧ್ಯಸ್ಥಿಕೆ" ವಿಶೇಷ ಅಭಿಯಾನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿದ್ದು, ಉತ್ತಮ ಸ್ಪಂದನೆ ದೊರೆಯುತ್ತಿದೆ. ಇದರ ಜೊತೆಗೆ ಲೋಕ್ ಅದಾಲತ್ ಕೂಡ ನಡೆಯಲಿದ್ದು, ಸಾರ್ವಜನಿಕರು ಪ್ರಯೋಜನ ಪಡೆದುಕೊಳ್ಳಬೇಕು ಎಂದರು. ಪ್ರತೀ ವರ್ಷ ನಾಲ್ಕು ಬಾರಿ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗುತ್ತಿದೆ. ಜಿಲ್ಲೆಯ ಎಲ್ಲಾ ಆರು ತಾಲ್ಲೂಕುಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಆಯಾಯ ನ್ಯಾಯಾಲಯಗಳಲ್ಲಿ ರಾಜಿ ಸಂಧಾನದ ಮೂಲಕ ವಿಲೇವಾರಿ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

<><><>

ಮಾದಕ ವಸ್ತುಗಳ ಸೇವನೆಯಿಂದ ದೇಹ ಮತ್ತು ಮನಸ್ಸಿನ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಯುವಕರು ಮಾದಕ ವಸ್ತುಗಳಿಂದ ದೂರ ಇರಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ಹೇಳಿದ್ದಾರೆ. ಯಾದಗಿರಿ ನಗರದ ಡಾನ್ ಬಾಸ್ಕೋ ಪದವಿ ಮಹಾ ವಿದ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಆಯೋಜಿಸಿದ್ದ ಮಾದಕ ವಸ್ತುಗಳು ಹಾಗೂ ಮಾನಸಿಕ ಆರೋಗ್ಯ ಕುರಿತ

ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದಲ್ಲಿ ಮಾದಕ ವಸ್ತುಗಳ ಸೇವನೆಯು ಅತಿ ಹೆಚ್ಚಾಗಿ ಕಂಡುಬರುತ್ತಿದೆ. ಅದರಲ್ಲೂ, ಯುವ ಪೀಳಿಗೆ ಮಾದಕ ವಸ್ತುಗಳಿಗೆ ದಾಸರಾಗುತ್ತಿದ್ದಾರೆ. ಮಾದಕ ವಸ್ತುಗಳ ಸೇವನೆಯಿಂದ ಖಿನ್ನತೆ, ಆತಂಕ, ಮಾನಸಿಕ ಅಸ್ವಸ್ಥತೆಯಂತಹ ಗಂಭೀರ ಸಮಸ್ಯೆಗಳು ಅಂಟಿಕೊಳ್ಳುತ್ತವೆ ಎಂದರು.

<><><><>

ಮೈಸೂರಿನ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಬೆಂಗಳೂರು ಬ್ಲಾಸ್ಟರ್ಸ್ ಮತ್ತು ಮಂಗಳೂರು ಡ್ರಾಗನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩.೧೫ಕ್ಕೆ ಆರಂಭವಾಗಲಿದೆ. ರಾತ್ರಿ ೭:೧೫ಕ್ಕೆ ನಡೆಯುವ ಮತ್ತೊಂದು ಪಂದ್ಯದಲ್ಲಿ ನಮ್ಮ ಶಿವಮೊಗ್ಗ ಮತ್ತು ಮೈಸೂರು ವಾರಿಯರ್ಸ್ ತಂಡಗಳು ಸೆಣಸಾಟ ನಡೆಸಲಿವೆ.

<><><><>

ಚೆನ್ನೈ-ಬೆಂಗಳೂರು ರಸ್ತೆ ಕಾರಿಡಾರ್‌ನಂತೆ ತುಮಕೂರು-ಬೆಂಗಳೂರು ರಸ್ತೆ ಕಾರಿಡಾರ್ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದ್ದು, ಶೀಘ್ರದಲ್ಲಿ ಕಾಮಗಾರಿ ಆರಂಭವಾಗುತ್ತಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ತುಮಕೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತುಮಕೂರು-ಬೆಂಗಳೂರು ನಡುವೆ ಚತುಷ್ಪಥ ರೈಲ್ವೆ ಅಳಿ ನಿರ್ಮಾಣಕ್ಕೆ ಸರ್ವೇ ನಡೆಸಲಾಗಿದ್ದು, ಡಿಪಿಆರ್ ಆಗಬೇಕಿದೆ. ಮುಂದಿನ ೧೦ ರಿಂದ ೧೫ ವರ್ಷಗಳಲ್ಲಿ ತುಮಕೂರು, ಬೆಂಗಳೂರಿಗೆ ಸಮನಾಗಿ ಬೆಳವಣಿಗೆಯಾಗಲಿದೆ. ಇದಕ್ಕೆ ಪೂರಕವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಇದೇ ವೇಳೆ ಅವರು, ತುಮಕೂರು ಮಹಾನಗರ ಪಾಲಿಕೆಯ ೨ ಎಕರೆ ಜಾಗವನ್ನು ಕಾಂಗ್ರೆಸ್ ಪಕ್ಷದ ಭವನ ನಿರ್ಮಾಣಕ್ಕಾಗಿ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಂಡು ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡಿರುವ ಕುರಿತು ಖಂಡನೆ ವ್ಯಕ್ತಪಡಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>